ಡಿ.ಕೆ. ರಂಗಪ್ಪ ಇವರು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಒಂದು ರಿಟ್ ಅರ್ಜಿಯನ್ನು ಸಲ್ಲಿಸಿರು ತ್ತಾರೆ. (ಶಿಂಷಿ.ಲೆರೆ) ಉಚ್ಚ ನ್ಯಾಯಾಲಯವು ದಿನಾಂಕ ೨೫-೩-೮೮ ರಂದು ತಡೆ ಆಜ್ಞೆ ನೀಡಿರುತ್ತದೆ ಮತ್ತು, ಈ ಪ್ರಕರಣವು ನ್ಯಾಯಾಲಯದ ಮುಂದೆ ಇರುವುದರಿಂದ ಚರ್ಚೆಯು ಸಬ್‌ಜುಡಿಸ್ ಆಗುವುದು. ಮತ್ತೆ ಹೈಕೋರ್ಟಿನಲ್ಲಿ ಸ್ಟೇ ಇದೆ. ನ್ಯಾಯಾಲಯದಲ್ಲಿ ಏನು ತೀರ್ಪು ಬರುತ್ತದೆಯೋ ಆ ಪ್ರಕಾರ ನಡೆದುಕೊಳ್ಳುತ್ತೇವೆ. ಇನ್ನು ತಹಶೀಲ್ದಾರರ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ. ಆ ಬಗ್ಗೆ ನಾನು ವಿಚಾರಣೆ ಮಾಡುತ್ತೇನೆ.

ಶಾಸನ ರಚನಾ ಕಾರ್ಯಕಲಾಪಗಳು

1988ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಸಚಿವರು) —ಮಾನ್ಯ ಅಧ್ಯಕ್ಷರೇ, ೧೯೮೮ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೮ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜೀವರಾಜ ಆಳ್ವ (ಮಾನ್ಯ ಉನ್ನತ ಶಿಕ್ಷಣ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೮ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು. —ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲಾಗಿದೆ.*

ವಿತ್ತೀಯ ಕಾರ್ಯಕಲಾಪಗಳು

ಶ್ರೀ ರಮೇಶ್ ಸಿ ಜಿಗಜಿಣಗಿ (ಗಣಿ ಮತ್ತು ಭೂವಿಜ್ಞಾನ, ಯುವಜನ ಸೇವಾ ರಾಜ್ಯ ಸಚಿವರು)—ಸನ್ಮಾನ್ಯ ಅಧ್ಯಕ್ಷರೇ,

ಅಭಿಯಾಚನೆ ಕ್ರಮಾಂಕ 13 ಮತ್ತು 7

(ಗಣಿ, ಭೂವಿಜ್ಞಾನ ಮತ್ತು ಯಂಗವಜನ ಸೇವಾ ಇಲಾಖೆಗಳು)

ಅಭಿಯಾಚನೆ ಕ್ರಮಾಂಕ ೧೩ ಯುವಜನ ಸೇವೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೯ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಯುವಜನ ಸೇವೆ ಸಂದಾಯ ಮಾಡುವಲ್ಲಿ ಬರತಕ್ಕ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೧,೪೧,೯೯,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಲೇಖಾನು ದಾನದಲ್ಲಿ ಮುಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

---

*Annexure